ಕರ್ನಾಟಕ ಸರ್ಕಾರ

# ತಾಲ್ಲೂಕು ಪಂಚಾಯತಿ ಕಾರ್ಯಾಲಯ, ಚಿಕ್ಕಬಳ್ಳಾಪುರ

**ಸಂ:** ತಾ.ಪಂ.ಚಿ/ಕಾ.ನಿ.ಅ/ಸಿಆರ್-1 /2024-25. 1212 **ದಿನಾಂಕ;** 18.07.2024.

## ಜ್ಞಾಪನ

**ವಿಷಯ:-** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳನ್ನು ನೋಂದಾಯಿಸಲು ಕ್ರಮ ವಹಿಸುವ ಬಗ್ಗೆ.

**ಉಲ್ಲೇಖ:-** 1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ರವರ ಪತ್ರದ ಸಂಖ್ಯೆ: ಕಪಂರಾಆ/ ಅಭಿವೃದ್ಧಿ/ 393/ 2024. ದಿನಾಂಕ: 31.05.2024.

2. ಮಾನ್ಯ ಉಪಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರ ಪತ್ರದ ಸಂಖ್ಯೆ:CKBZP-11013(33)/39/2024-ADMIN-CHIKKABALLAPURA (ಇ-47097) ದಿನಾಂಕ: 15.06.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಚಿಕ್ಕಬಳ್ಳಾಪುರ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳನ್ನು ಈ ಕೆಳಕಂಡಂತೆ ನಿಯಮಾನುಸಾರ ಪರಿಶೀಲಿಸಿ ತುರ್ತಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಆಳವಡಿಸುವ ಮೂಲಕ ನಮೂನೆಗಳನ್ನು ವಿತರಿಸಲು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಲ್ಲಿಸಿರುವ 44 ಪ್ರಸ್ತಾವನೆಗಳ ಬಗ್ಗೆ ಪರಿಶೀಲಿಸಿ ಲಭ್ಯವಿರುವ ಸರ್ಕಾರಿ ಜಮೀನಿನಲ್ಲಿ ಖಬರಸ್ಥಾನ್ ಜಮೀನುಗಳಿಗೆ ಮಂಜೂರಾತಿ ನೀಡುವ ಹಾಗೂ ಲಭ್ಯವಿಲ್ಲದ ಸಂದರ್ಭದಲ್ಲಿ ನಿಯಮಾನುಸಾರ ಖಾಸಗಿ ಜಮೀನು ಖರೀದಿಸಿ ವಿತರಿಸುವ ಬಗ್ಗೆ ಕಂದಾಯ ಇಲಾಖೆಯೊಂದಿಗೆ ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಉಲ್ಲೇಖಿತ (1) ರ ಪತ್ರದಲ್ಲಿ ಸೂಚಿಸಿರುತ್ತಾರೆ.

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಒಟ್ಟು 17416 ವಕ್ಫ್ ಆಸ್ತಿಗಳ ಖಾತೆ ಬದಲಾವಣೆಯಾಗಬೇಕಿದ್ದು, ಈ ವಕ್ಫ್ ಆಸ್ತಿಗಳ ತಂತ್ರಾಂಶದಡಿಯಲ್ಲಿ ನೋಂದಾಯಿಸುವುದು.
2. ನೋಂದಾಯಿಸಲ್ಪಡದ ಆಸ್ತಿಗಳ ವಿವರಗಳನ್ನು ಆಡಳಿತಾತ್ಮಕವಾಗಿ ಅಧಿನಿಯಮದಡಿ ತರುವುದು.

ಅದರಂತೆ, ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳನ್ನು ನಿಯಮಾನುಸಾರ ಪರಿಶೀಲಿಸಿ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ ನಮೂನೆಗಳನ್ನು ವಿತರಿಸಲು ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲು ಉಲ್ಲೇಖ (2) ರಲ್ಲಿ ಸೂಚಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಉಲ್ಲೇಖಿತ ಪತ್ರಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸುತ್ತಾ ಸದರಿ ಪತ್ರಗಳಲ್ಲಿ ಸೂಚಿಸಿರುವಂತೆ ವಕ್ಫ್ ಆಸ್ತಿಗಳನ್ನು ನಿಯಮಾನುಸಾರ ಪರಿಶೀಲಿಸಿ ಇ-ಸ್ವತ್ತು ತಂತ್ರಾಂಶದಲ್ಲಿ ಆಳವಡಿಸಿ ನಮೂನೆಗಳನ್ನು ವಿತರಿಸಲು ಕ್ರಮ ಕೈಗೊಳ್ಳಲು ಸೂಚಿಸಿದೆ.

G.R. [signature]

ಕಾರ್ಯನಿರ್ವಾಹಕ ಅಧಿಕಾರಿ,
ತಾಲ್ಲೂಕು ಪಂಚಾಯಿತಿ,
ಚಿಕ್ಕಬಳ್ಳಾಪುರ.

**ರವರಿಗೆ,**

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
23 ಗ್ರಾಮ ಪಂಚಾಯತಿಗಳು.
ಚಿಕ್ಕಬಳ್ಳಾಪುರ.

>>2

ಪ್ರತಿಯನ್ನು,

1. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ
ಜಿಲ್ಲಾಡಳಿತ ಭವನ, ಶಿಡ್ಲಘಟ್ಟ ರಸ್ತೆ
ದೂರವಾಣಿ : 08156-277016
ಇ-ಮೇಲ್ : zpadmckbpur@gmail.com

ಸಂಖ್ಯೆ: CKBZP-11013(33)/39/2024-ADMN-CHIKKABALLAPURA (ಇ-47097) ದಿನಾಂಕ:15.06.2024.

ಇವರಿಗೆ,

ಕಾರ್ಯನಿರ್ವಾಹಕ ಅಧಿಕಾರಿ
ತಾಲ್ಲೂಕು ಪಂಚಾಯತಿ,
ಬಾಗೇಪಲ್ಲಿ, ಚಿಕ್ಕಬಳ್ಳಾಪುರ, ಚಿಂತಾಮಣಿ,
ಗೌರಿಬಿದನೂರು, ಗುಡಿಬಂಡೆ, ಶಿಡ್ಲಘಟ್ಟ,
ಚೇಳೂರು ಮತ್ತು ಮಂಚೇನಹಳ್ಳಿ

ಮಾನ್ಯರೇ,

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳನ್ನು ನೋಂದಾಯಿಸಲು ಕ್ರಮವಹಿಸುವ ಕುರಿತು.

**ಉಲ್ಲೇಖ:** ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ರವರ ಪತ್ರದ ಸಂಖ್ಯೆ:ಕಪಂರಾಆ/ ಅಭಿವೃದ್ಧಿ/ 393/2024 ದಿನಾಂಕ:31.05.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳನ್ನು ಈ ಕೆಳಕಂಡಂತೆ ನಿಯಮಾನುಸಾರ ಪರಿಶೀಲಿಸಿ ತುರ್ತಾಗಿ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸುವ ಮೂಲಕ ನಮೂನೆಗಳನ್ನು ವಿತರಿಸಲು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಲ್ಲಿಸಿರುವ 44 ಪ್ರಸ್ತಾವನೆಗಳ ಬಗ್ಗೆ ಪರಿಶೀಲಿಸಿ, ಲಭ್ಯವಿರುವ ಸರ್ಕಾರಿ ಜಮೀನಿನಲ್ಲಿ ಖಬರಸ್ತಾನ್ ಜಮೀನುಗಳಿಗೆ ಮಂಜೂರಾತಿ ನೀಡುವ ಹಾಗೂ ಲಭ್ಯವಿಲ್ಲದ ಸಂದರ್ಭದಲ್ಲಿ ನಿಯಮಾನುಸಾರ ಖಾಸಗಿ ಜಮೀನು ಖರೀದಿಸಿ ವಿತರಿಸುವ ಬಗ್ಗೆ, ಕಂದಾಯ ಇಲಾಖೆಯೊಂದಿಗೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿರುತ್ತದೆ.

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಒಟ್ಟು 17416 ವಕ್ಫ್ ಆಸ್ತಿಗಳ ಖಾತೆ ಬದಲಾವಣೆಯಾಗಬೇಕಿದ್ದು, ಈ ವಕ್ಫ್ ಆಸ್ತಿಗಳ ತಂತ್ರಾಂಶದಡಿಯಲ್ಲಿ ನೋಂದಾಯಿಸುವುದು.
2. ನೋಂದಾಯಿಸಲ್ಪಡದ ಆಸ್ತಿಗಳ ವಿವರಗಳನ್ನು ಆಡಳಿತಾತ್ಮಕವಾಗಿ ಅಧಿನಿಯಮದಡಿ ತರುವುದು.

ಅದರಂತೆ ಉಲ್ಲೇಖಿತ ಪತ್ರವನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳನ್ನು ನಿಯಮಾನುಸಾರ ಪರಿಶೀಲಿಸಿ ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ ನಮೂನೆಗಳನ್ನು ವಿತರಿಸಲು ಅಗತ್ಯ ಕ್ರಮಕೈಗೊಳ್ಳಲು ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಸೂಚಿಸಿದೆ.
**(ಕಛೇರಿ ಟಿಪ್ಪಣಿ ಮು.ಕಾ.ನಿ.ಅ ರವರಿಂದ ಅನುಮೋದಿಸಲ್ಪಟ್ಟಿದೆ)**

ತಮ್ಮ ವಿಶ್ವಾಸಿ

15/6/24

ಉಪ ಕಾರ್ಯದರ್ಶಿ
ಜಿಲ್ಲಾ ಪಂಚಾಯತ್, ಚಿಕ್ಕಬಳ್ಳಾಪುರ

Mail 20/6/24

21/6/24

ಪ್ರತಿಯನ್ನು:

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ರವರ ಮಾಹಿತಿಗಾಗಿ.
2. ಜಿಲ್ಲೆಯ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ (ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ) ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.